# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **455** |
| ಸದಸ್ಯರ ಹೆಸರು | : | ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ<br>(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 19-02-2024 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

****

| | ಪ್ರಶ್ನೆ | ಉತ್ತರ |
|---|---|---|
| ಅ) | ವಿದ್ಯುತ್ ಸಂಪರ್ಕ ರಹಿತ ಮನೆಗಳಿಗೆ ವಿದ್ಯುತ್ ಸೌಲಭ್ಯವನ್ನು ಕಲ್ಪಿಸಲು ಸರ್ಕಾರವು ಬೆಳಕು ಯೋಜನೆಯನ್ನು ಜಾರಿಗೆ ತಂದ ಸಂದರ್ಭದಲ್ಲಿ ವಾಸಸ್ಥಳದ ಆಧಾರ್ ಕಾರ್ಡ್ ಇದ್ದರೆ ವಿದ್ಯುತ್ ಸಂಪರ್ಕವನ್ನು ನೀಡುವ ಯೋಜನೆಯಡಿ ಬಡ ಕುಟುಂಬಗಳಿಗೆ ವಿದ್ಯುತ್ ಸಂಪರ್ಕವನ್ನು ಕಲ್ಪಿಸಿದ್ದು, ಪ್ರಸ್ತುತ ಈ ಯೋಜನೆ ಜಾರಿಯಲ್ಲಿ ಇಲ್ಲದಿರುವುದರಿಂದ ಬಡ ಕುಟುಂಬಗಳಿಗೆ ವಿದ್ಯುತ್ ಸಂಪರ್ಕ ಪಡೆಯುವುದು ಕಷ್ಟಕರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ರಾಜ್ಯದ ಎಲ್ಲಾ ಮನೆಗಳಿಗೂ ವಿದ್ಯುತ್ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ರಾಜ್ಯದ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಸರ್ಕಾರಿ ಆದೇಶ ಸಂಖ್ಯೆ: Energy/606/VSC/2021, ದಿನಾಂಕ 29.9.2021 ರ ಆದೇಶದಂತೆ ವಿದ್ಯುತ್ ಸಂಪರ್ಕ ಇಲ್ಲದಿರುವ ಬಡ ಕುಟುಂಬದ ಮನೆಗಳಿಗೆ ದೀನದಯಾಳ ಉಪಾದ್ಯಾಯ ಗ್ರಾಮಜ್ಯೋತಿ ಯೋಜನೆ ಹಾಗೂ ಸೌಭಾಗ್ಯ ಯೋಜನೆಯ ಮಾದರಿಯಲ್ಲೇ ರೇಷನ್ ಕಾರ್ಡ್, ಆಧಾರ್ ಕಾರ್ಡ್, ವೋಟರ ಐ.ಡಿ., ಗ್ರಾಮ ಪಂಚಾಯತಿಯಿಂದ ಒದಗಿಸುವ ಪಟ್ಟಿ ಅಥವಾ ಇನ್ನಿತರೇ ದಾಖಲಾತಿಗಳನ್ನು ಪರಿಗಣಿಸಿ ಉಚಿತ ವಿದ್ಯುತ್ ಸಂಪರ್ಕ ಕಲ್ಪಿಸಲು ಆದೇಶಿಸಲಾಗಿತ್ತು. ಮುಂದುವರೆದು ರಾಜ್ಯ ಸರ್ಕಾರವು ಬೆಳಕು ಯೋಜನೆಯನ್ನು ಆದೇಶ ಸಂಖ್ಯೆ: Energy/169/VSC/2022, ದಿನಾಂಕ 05.04.2022 ರನ್ವಯ 31.03.2023 ರವರೆಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ವಿಸ್ತರಿಸಲಾಗಿತ್ತು. ಬೆಳಕು ಯೋಜನೆಯು ಮಾರ್ಚ್-2023 ರ ಅಂತ್ಯಕ್ಕೆ ಮುಕ್ತಾಯಗೊಂಡಿರುತ್ತದೆ.<br>ಚಾವಿಸನಿನಿ ಮತ್ತು ಮವಿಕಂ ವ್ಯಾಪ್ತಿಯ ಜೇನು ಕುರುಬ ಮತ್ತು ಕೊರಗ ಗುಂಪುಗಳಿಗೆ ಉಚಿತ ವಿದ್ಯುತ್ ಸಂಪರ್ಕವನ್ನು PM-JANMAN ಯೋಜನೆಯಡಿ ಕಲ್ಪಿಸಲಾಗುತ್ತಿದೆ.<br>ಮುಂದುವರೆದಂತೆ ಇತರೆ ಗೃಹಬಳಕೆಯ ಸ್ಥಾವರಗಳಿಗೆ ನಿಯಮಾನುಸಾರ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲಾಗುತ್ತಿದೆ. |
| ಆ) | ರಾಜ್ಯದಲ್ಲಿ ಇಲ್ಲಿಯವರೆಗೂ ವಿದ್ಯುತ್ ಸಂಪರ್ಕ ಇಲ್ಲದ ಹಳ್ಳಿಗಳು ಎಷ್ಟು; (ಜಿಲ್ಲಾವಾರು ಅಂಕಿ ಅಂಶಗಳೊಂದಿಗೆ ಮಾಹಿತಿ ನೀಡುವುದು); ವಿದ್ಯುತ್ ಇಲ್ಲದ ಹಳ್ಳಿಗಳ ಕುರಿತು ಸರ್ಕಾರದ ನಿಲುವೇನು? | ಪ್ರಸ್ತುತ ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ವಿದ್ಯುತ್ ಸಂಪರ್ಕ ಇಲ್ಲದ ಯಾವುದೇ ಹಳ್ಳಿಗಳು ಇರುವುದಿಲ್ಲ. |

ಸಂಖ್ಯೆ: ಎನರ್ಜಿ 43 ಇಬಿಎಸ್ 2024

(ಕೆ.ಜೆ.ಜಾರ್ಜ್) 21/2/24
ಇಂಧನ ಸಚಿವರು